Phone: 91- 080-23330984
080-23330149

Website :www.uasbangalore.edu.in
Email : registrar@uasbangalore.edu.in

ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು
ಕುಲಸಚಿವರ ಕಛೇರಿ, ನಾಯಕ್ ಭವನ, ಗಾಕೃವಿಕೆ, ಬೆಂಗಳೂರು

**UNIVERSITY OF AGRICULTURAL SCIENCES, BANGALORE**

**Office of the Registrar, Naik Bhavan, GKVK, Bengaluru-560 065**

ಕ್ರ.ಸಂ: ಕು.ಸ./ಸಕುಸ/ಎಸ್‌ಎಫ್‌ಎ/ಡಿಪ್ಲೊಮಾ(ಕೃಷಿ) ಪ್ರವೇಶ/2024-25/96. ದಿನಾಂಕ: 15.07.2024

# ಅಧಿಸೂಚನೆ

ವಿಷಯ: **ಡಿಪ್ಲೊಮಾ (ಕೃಷಿ) ಕೋರ್ಸ್‌ಗೆ (ಎರಡು ವರ್ಷ) 2024-25ನೇ ಶೈಕ್ಷಣಿಕ ವರ್ಷಕ್ಕೆ ಅರ್ಜಿಯನ್ನು ಆಹ್ವಾನಿಸಿರುವುದರ-ಬಗ್ಗೆ.**

ಉಲ್ಲೇಖ 1. ಸಂಖ್ಯೆ:ಕುಸ/ಸಕುಸ/ ಎಸ್‌ಎಫ್‌ಎ /ಕೃಷಿ-ಡಿಪ್ಲೋಮಾ/2023-24,ದಿನಾಂಕ:29.05.2024
2. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಬೆಂಗಳೂರು ಇವರ ಪತ್ರದ ಸಂಖ್ಯೆ: AGRI/24/AUB/2024, ದಿನಾಂಕ: 04.07.2024
3. ಶಿಕ್ಷಣ ನಿರ್ದೇಶಕರು, ಕೃಷಿ ವಿಶ್ವವಿದ್ಯಾನಿಲಯ, ಜಿಕೆವಿಕೆ, ಬೆಂಗಳೂರು ಇವರ ಶಿಫಾರಸ್ಸಿನ ದಿನಾಂಕ:13.07.2024
4. ಕುಲಪತಿಗಳು ಕೃಷಿ ವಿಶ್ವವಿದ್ಯಾನಿಲಯ, ಜಿಕೆವಿಕೆ, ಬೆಂಗಳೂರು ಇವರ ಅನುಮೋದನೆಯ ದಿನಾಂಕ:13.07.2024

***

ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರಿನ ಅಧೀನದಲ್ಲಿರುವ ಕೃಷಿ ಮಹಾವಿದ್ಯಾಲಯ, ವಿ.ಸಿ. ಫಾರಂ, ಮಂಡ್ಯ, ದಲ್ಲಿ **2024-25ನೇ** ಶೈಕ್ಷಣಿಕ ವರ್ಷದಲ್ಲಿ ಎರಡು ವರ್ಷಗಳ ಡಿಪ್ಲೊಮಾ (ಕೃಷಿ) ಕೋರ್ಸ್‌ಗೆ ನಿಗದಿತ ನಮೂನೆಯಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

**ಬೋಧನಾ ಕ್ರಮ ಮತ್ತು ಮಾಧ್ಯಮ:** ಡಿಪ್ಲೊಮಾ (ಕೃಷಿ) ಯನ್ನು ಕನ್ನಡ ಮಾಧ್ಯಮದಲ್ಲಿ ಸೆಮಿಸ್ಟರ್ (4 ಸೆಮಿಸ್ಟರ್) ಪದ್ಧತಿಯಲ್ಲಿ ಬೋಧಿಸಲಾಗುವುದು.

**ಪ್ರವೇಶ ಅರ್ಹತೆ:**

- ಕೃಷಿ ವಿಶ್ವವಿದ್ಯಾನಿಲಯದಲ್ಲಿ ಡಿಪ್ಲೊಮಾ. (ಕೃಷಿ) ಕೋರ್ಸ್‌ಗೆ ಪ್ರವೇಶ ಕೋರುವ ಅಭ್ಯರ್ಥಿಗಳು ಎಸ್.ಎಸ್. ಎಲ್.ಸಿ. ಪರೀಕ್ಷೆಯಲ್ಲಿ ಕನ್ನಡ ಪಠ್ಯವನ್ನು ಭಾಷೆಯಾಗಿ ಅಭ್ಯಸಿಸಿ ಕನಿಷ್ಟ **ಶೇ.45** ಅಂಕಗಳೊಂದಿಗೆ ಉತ್ತೀರ್ಣರಾಗಿರಬೇಕು (ಪ.ಜಾ./ಪ.ಪಂ./ಪ್ರವರ್ಗ-I ರವರುಗಳಿಗೆ ಕನಿಷ್ಠ **ಶೇ.40** ಅಂಕಗಳೊಂದಿಗೆ ಉತ್ತೀರ್ಣರಾಗಿರಬೇಕು).
- ದಿನಾಂಕ.**30.06.2024** ರಂದು ಅಭ್ಯರ್ಥಿಗಳ ವಯಸ್ಸು **19** ವರ್ಷಗಳನ್ನು ಮೀರಿರಬಾರದು.
- ರೈತರ ಹಾಗು ಕೃಷಿ ಕಾರ್ಮಿಕರ ಮಕ್ಕಳಿಗೆ ಶೇ.50ರಷ್ಟು ಸೀಟುಗಳನ್ನು ಡಿಪ್ಲೊಮಾ (ಕೃಷಿ) ಪ್ರವೇಶಾತಿಗೆ ಮೀಸಲಿಡಲಾಗಿದೆ.
- ಅರ್ಜಿ ಹಾಗೂ ಮಾಹಿತಿ ಪುಸ್ತಕವನ್ನು ಕೃಷಿ ವಿಶ್ವವಿದ್ಯಾನಿಲಯ ಜಿ.ಕೆ.ವಿ.ಕೆ., ಬೆಂಗಳೂರು-560065, ವೆಬ್‌ಸೈಟ್ www.uasbangalore.edu.in ನಲ್ಲಿ **ದಿನಾಂಕ:15.07.2024** ರಿಂದ **10.08.2024** ರವರೆಗೆ ಡೌನ್‌ಲೋಡ್ ಮಾಡಬಹುದು. ಈ ರೀತಿ ವೆಬ್‌ಸೈಟ್ ಮುಖಾಂತರ ಪಡೆದು ಭರ್ತಿಮಾಡಿದ ಅರ್ಜಿಗಳನ್ನು, ಅರ್ಜಿಯ ನಿಗದಿತ ಶುಲ್ಕವನ್ನು ಡಿ.ಡಿ. ರೂಪದಲ್ಲಿ ಲಗತ್ತಿಸಿ, **ದಿನಾಂಕ. 10.08.2024** ರೊಳಗೆ ಕಳುಹಿಸಿಕೊಡಬೇಕು. **ದಿನಾಂಕ.11.08.2024ರ** ನಂತರ ಡಿ.ಡಿ. ಯನ್ನು ಪಡೆದು ಸಲ್ಲಿಸುವ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

**ಅರ್ಜಿ ಶುಲ್ಕ:**

- ಸಾಮಾನ್ಯ ವರ್ಗದವರಿಗೆ ರೂ.500/-ಪ.ಜಾ./ಪ.ಪಂ./ಪ್ರವರ್ಗ-I ರವರಿಗೆ ರೂ. **250/-**ಆಗಿದ್ದು, ರಾಷ್ಟ್ರೀಕೃತ ಬ್ಯಾಂಕ್‌ಗಳ (Nationalised Bank) ಮೂಲಕ ಡಿ.ಡಿ.ಯನ್ನು **Comptroller, UAS, GKVK, Bangalore-560065** ಇವರ ಹೆಸರಿನಲ್ಲಿ ಪಡೆದು ಎಲ್ಲಾ ಅಗತ್ಯ ಅಡಕಗಳೊಂದಿಗೆ ಭರ್ತಿ ಮಾಡಿದ ಅರ್ಜಿಗಳನ್ನು **ಕುಲಸಚಿವರು, ಕೃಷಿ ವಿಶ್ವವಿದ್ಯಾನಿಲಯ, ಜಿ.ಕೆ.ವಿ.ಕೆ., ಬೆಂಗಳೂರು-560065** ಇಲ್ಲಿಗೆ **ದಿನಾಂಕ 10.08.2024** ರ **(ಸಂಜೆ 4.00 ಗಂಟೆ)** ಒಳಗೆ ತಲುಪುವಂತೆ ಖುದ್ದಾಗಿ ಅಥವಾ ಅಂಚೆ ಮೂಲಕ ಕಳುಹಿಸಬಹುದು.
- **ದಿನಾಂಕ: 11.08.2024** ರ ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

**ಪ್ರವೇಶ ಮತ್ತು ಆಯ್ಕೆ ವಿಧಾನ :**

- ಸರ್ಕಾರದ ಆದೇಶಗಳ ಅನ್ವಯ ಸೀಟುಗಳನ್ನು ಭರ್ತಿ ಮಾಡಲಾಗುವುದು.
- ಅರ್ಹ ಅಭ್ಯರ್ಥಿಗಳನ್ನು ಮೆರಿಟ್ ಆಧಾರದ ಮೇಲೆ ರೋಸ್ಟರ್ ಪದ್ಧತಿಯನ್ನು ಅಳವಡಿಸಿ, ಪ್ರವೇಶಕ್ಕೆ ಆಯ್ಕೆ ಮಾಡಿ, ಆಯ್ಕೆಯಾದ ಅಭ್ಯರ್ಥಿಗಳಿಗೆ ಪತ್ರ ಹಾಗೂ ವೆಬ್ ಸೈಟ್ ಮುಖಾಂತರ ತಿಳಿಸಲಾಗುವುದು.

ಟಿಪ್ಪಣಿ: ಬೆಂಗಳೂರು ಕೃಷಿ ವಿಶ್ವವಿದ್ಯಾನಿಲಯವು ಯಾವುದೇ ಉದ್ಯೋಗ ಭರವಸೆಯ ಆಧಾರದ ಮೇಲೆ ಮೇಲ್ಕಂಡ ಕೋರ್ಸ್‌ನ್ನು ನಡೆಸುವುದಿಲ್ಲ.

ಆದೇಶದ ಮೇರೆಗೆ

ಕುಲಸಚಿವರು